# ಸಾರಾಂಶ

## ಮಾನ್ಯ ಸಭಾಪತಿಯವರು:

ವಿಧಾನ ಪರಿಷತ್ತಿನ 150ನೇ ಅಧಿವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:03.07.2023 ರಿಂದ 21.07.2023 ರವರೆಗೆ ಒಟ್ಟು 15 ದಿನಗಳು ಅಂದರೆ, 70.16 ಗಂಟೆಗಳು ನಡೆಸಲಾಗಿರುತ್ತದೆ.

ದಿನಾಂಕ:03.07.2023ರಂದು ಮಧ್ಯಾಹ್ನ:12.00 ಗಂಟೆಗೆ ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳನ್ನುದ್ದೇಶಿಸಿ ಮಾಡಿದ ಭಾಷಣದ ನಂತರ ಮಧ್ಯಾಹ್ನ:1.00 ಗಂಟೆಗೆ ಸದನವು ಪ್ರಾರಂಭಗೊಂಡಿತು.

ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಸಂವಿಧಾನದ ಪೀಠಿಕೆಯನ್ನು ಎಲ್ಲಾ ಮಾನ್ಯ ಶಾಸಕರುಗಳು ಓದಬೇಕೆಂದು ನಿರ್ಣಯಿಸಲಾಗಿರುವ ರೀತ್ಯಾ, ಪ್ರಸ್ತುತ ಅಧಿವೇಶನದ ಮೊದಲ ದಿನದ ಉಪವೇಶನದಲ್ಲಿ ಎಲ್ಲಾ ಮಾನ್ಯ ಶಾಸಕರುಗಳಿಂದ ಸಂವಿಧಾನದ ಪೀಠಿಕೆಯನ್ನು ಪಠಣ ಮಾಡಲಾಯಿತು.

ರಾಜ್ಯಪಾಲರ ವಂದನಾ ನಿರ್ಣಯದ ಮೇಲೆ 13 ಗಂಟೆ 33 ನಿಮಿಷಗಳು ಚರ್ಚೆ ನಡೆಸಿ ದಿನಾಂಕ:14.07.2023 ರಂದು ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದಂತೆ ವಂದನಾರ್ಪಣಾ ನಿರ್ಣಯವನ್ನು ಸದನವು ಅಂಗೀಕರಿಸಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 10 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಎಂ.ಐ.ಟಿ ಸ್ಕೂಲ್ ಆಫ್ ಗೌರ್ನಮೆಂಟ್, ಪುಣೆ ಇವರ ವತಿಯಿಂದ ರಾಷ್ಟ್ರಮಟ್ಟದ ನ್ಯಾಷನಲ್ ಲೆಜಿಸ್‌ಲೇಟರ್ಸ್ ಕಾನ್ಫರೆನ್ಸ್–2023ನ್ನು ದಿನಾಂಕ:15.06.2023 ರಿಂದ 17.06.2023ರವರೆಗೆ ಮುಂಬೈನ ಜಿಯೋ ವರ್ಲ್ಡ್ ಸೆಂಟರ್‌ನಲ್ಲಿ ಸಮರ್ಥ ಭಾರತವನ್ನು ನಿರ್ಮಾಣ ಮಾಡುವ ದಿಶೆಯಲ್ಲಿ ಆಯೋಜಿಸಿದ್ದ ಸಮ್ಮೇಳನದ ರುವಾರಿಯಾಗಿದ್ದ ಶ್ರೀ ರಾಹುಲ್ ಕರಾಡೆ ಜೀ ಹಾಗೂ ಅವರ ತಂಡಕ್ಕೆ ಸದನವು ಅಭಿನಂದನಾ ನಿರ್ಣಯವನ್ನು ಮಂಡಿಸಲಾಯಿತು.

....2

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ದಿನಾಂಕ:07.07.2023ರಂದು ಮಾನ್ಯ ಮುಖ್ಯಮಂತ್ರಿಯವರು 2023-24ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಒಪ್ಪಿಸಿದರು. ಆಯವ್ಯಯ ಅಂದಾಜುಗಳ ಮೇಲೆ ಸುಮಾರು 06 ಗಂಟೆ 0.40 ನಿಮಿಷಗಳ ಕಾಲ ಚರ್ಚೆ ನಡೆಸಿ, ದಿನಾಂಕ: 21.07.2023 ರಂದು ಸರ್ಕಾರದಿಂದ ಉತ್ತರಿಸಲಾಯಿತು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02, 03 ಹಾಗೂ 04ನೇ ಪಟ್ಟಿಗಳನ್ನು ಮಂಡಿಸಲಾಯಿತು.

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿಯನ್ನು (2023ನೇ ವರ್ಷದ ವರದಿ ಸಂಖ್ಯೆ:2) ಸಭೆಯ ಮುಂದಿಡಲಾಯಿತು.

ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 100ನೇ ವರದಿ, ಭರವಸೆಗಳ ಸಮಿತಿಯ 49ನೇ ವರದಿ, 2023ನೇ ಸಾಲಿನ ಸದಸ್ಯರುಗಳ ಖಾಸಗಿ ವಿಧೇಯಕಗಳು ಹಾಗೂ ನಿರ್ಣಯಗಳ ಸಮಿತಿಯ ಮೊದಲನೇ ವರದಿ, 15ನೇ ವಿಧಾನ ಸಭೆಯ 2020-21ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಂಬಂಧಪಟ್ಟ ಹನ್ನೆರಡನೇ ವಿಶೇಷ ವರದಿಗಳನ್ನು ಸದನದಲ್ಲಿ ಮಂಡಿಸಲಾಯಿತು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಹಣದಲ್ಲಿ ಅವ್ಯವಹಾರ ಮಾಡಿರುವುದನ್ನು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ವರದಿಯನ್ನು ಒಪ್ಪಿಸಲಾಯಿತು.

ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.04.2023 ರಿಂದ 06 ತಿಂಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಿರುವ ಹಾಗೂ ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:21.03.2023 ರಿಂದ 06 ತಿಂಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವಗಳನ್ನು ಸದನದಲ್ಲಿ ಮಂಡಿಸಿ, ಸದನದ ಸಹಮತಿಯನ್ನು ಪಡೆಯಲಾಯಿತು.

ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ ಚುನಾವಣೆ ನಡೆಸುವ ಬದಲು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಸದನದಲ್ಲಿ ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ನಿಯಮ 59 ರಡಿಯಲ್ಲಿ ಒಟ್ಟು 05 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 02 ಸೂಚನೆಗಳು ತಿರಸ್ಕೃತಗೊಂಡಿದ್ದು, 03 ಸೂಚನೆಗಳು ನಿಯಮ 68ಕ್ಕೆ ಪರಿವರ್ತನೆಯಾಗಿರುವ ಪೈಕಿ 01 ಸೂಚನೆಗೆ ಸದನದಲ್ಲಿ ಉತ್ತರಿಸಲಾಯಿತು.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 939 ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ 135 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 104 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 29 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು 804 ಪ್ರಶ್ನೆಗಳ ಪೈಕಿ 521 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 04 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. ಯಾವುದೇ ಸೂಚನೆಗಳನ್ನು ಚರ್ಚಿಸಿರುವುದಿಲ್ಲ.

ನಿಯಮ 72ರಡಿಯಲ್ಲಿ 159 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 19 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು.

....4

ನಿಯಮ 330ರಡಿಯಲ್ಲಿ 85 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 10 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು.

ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 56 ಸೂಚನೆಗಳ ಪೈಕಿ 46 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ನಿಯಮ 330ಎರ ವಿಶೇಷ ಪ್ರಸ್ತಾವಗಳಡಿಯಲ್ಲಿ ಸ್ವೀಕರಿಸಲಾಗಿರುವ ಒಟ್ಟು 12 ಸೂಚನೆಗಳ ಪೈಕಿ 07 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಒಟ್ಟು 13 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ)(ತಿದ್ದುಪಡಿ) ವಿಧೇಯಕ, 2023 ನ್ನು ಪರಿಶೀಲನಾ ಸಮಿತಿಗೆ ವಹಿಸಲಾಯಿತು.

<u>ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿದ ನಂತರ</u>:-

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, <u>ಸದನವನ್ನು ಅನಿರ್ದಿಷ್ಟಕಾಲದವರೆಗೆ ಮುಂದೂಡುತ್ತಿದ್ದೇನೆ</u>.

****